ಕಾಲೇಜು ಶಿಕ್ಷಣ ಇಲಾಖೆಯಿಂದ ಹಣದ ಮಂಜೂರುತಿ

2156 - ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮಾಗಡಿ ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಮಂಜೂರು ಮಾಡಿದ ಹಣವೆಷ್ಟು?*

ಆ) *ಈ ಹಣದಲ್ಲಿ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ?*

ಶ್ರೀ ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು) :

ಅ) ಮಾಗಡಿ ಸರ್ಕಾರಿ ಕಾಲೇಜಿಗೆ ರೂ.04.00 ಲಕ್ಷಗಳನ್ನು ಮಂಜೂರು ಮಾಡಲಾಗಿದೆ. ಕುದೂರು ಸರ್ಕಾರಿ ಕಾಲೇಜಿಗೆ ಹಣ ಮಂಜೂರು ಮಾಡಿರುವುದಿಲ್ಲ.

ಆ) ಲೋಕೋಪಯೋಗಿ ಇಲಾಖೆಯವರು ಮಾಗಡಿ ಸರ್ಕಾರಿ ಕಾಲೇಜಿನ ಕಟ್ಟಡ ಕಾಮಗಾರಿಯನ್ನು ಕೈಗೊಳ್ಳಲು ಟೆಂಡರ್ ಕರೆದಿರುತ್ತಾರೆ.

ನಿರ್ಮಲ ಗ್ರಾಮ ಯೋಜನೆಯ ಶೌಚಾಲಯ ನಿರ್ಮಾಣದಲ್ಲಿ ಭ್ರಷ್ಟಾಚಾರ

2158 - ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ನಿರ್ಮಲ ಗ್ರಾಮ ಯೋಜನೆಯಲ್ಲಿ 1995-96, 1996-97ನೇ ಸಾಲಿನಲ್ಲಿ ಪ್ರತಿ ತಾಲ್ಲೂಕು ಪಂಚಾಯತಿಗೆ ಶೌಚಾಲಯ ನಿರ್ಮಿಸಲು ಮಂಜೂರಾದ ಹಣವೆಷ್ಟು?*

ಆ) *ಈವರೆಗೆ ರಾಜ್ಯದಲ್ಲಿ ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಗಿದೆ?*

ಇ) *ಶೌಚಾಲಯ ನಿರ್ಮಾಣದಲ್ಲಿ ರಾಜ್ಯದಲ್ಲಿ ವ್ಯಾಪಕ ಅವ್ಯವಹಾರ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಈ) *ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪ.ರಾಜ್. ಸಚಿವರು) :

ಅ) ತಾಲ್ಲೂಕುವಾರು ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ.

ಆ) ರಾಜ್ಯದಲ್ಲಿ, 3,14,679 ಶೌಚಾಲಯಗಳನ್ನು ನಿರ್ಮಿಸಲಾಗಿದೆ. (2-10-95 ರಿಂದ 30-6-96ರ ವರೆಗೆ) ಕೆಲವೇ ಅವ್ಯವಹಾರದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ.

ಇ) ಈಗಾಗಲೇ 2 ಗ್ರಾಮಪಂಚಾಯತ್‌ಗಳ ಮೂವರು ಸಿಬ್ಬಂದಿಗಳ ಮೇಲೆ ಶಿಸ್ತಿನ ಕ್ರಮ ತೆಗೆದುಕೊಳ್ಳಲಾಗಿದೆ. ಉಳಿದ ಪ್ರಕರಣಗಳು ಪರಿಶೀಲನೆಯಲ್ಲಿದೆ.